ಕರ್ನಾಟಕ ಸರ್ಕಾರ

ಸಂಖ್ಯೆ: ಜೆ.ಆರ್.ಓ/1(ಎ)/70/2016-17

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ
ಆಯುಕ್ತಾಲಯ, ಆನಂದರಾವ್ ವೃತ್ತ,
ಬೆಂಗಳೂರು, ದಿನಾಂಕ: 20.2.17

ಇವರಿಗೆ,

ಎಲ್ಲಾ ಜಿಲ್ಲಾ ಆರೋಗ್ಯ ಮತ್ತು ಕುಟುಂಬ
ಕಲ್ಯಾಣಾಧಿಕಾರಿಗಳು,
--------------ಜಿಲ್ಲೆ.

**ವಿಷಯ:** ಗುತ್ತಿಗೆ ಆಧಾರದಲ್ಲಿ ನೇಮಕ ಹೊಂದಿರುವ ವೈದ್ಯರುಗಳನ್ನು ಖಾಯಂಗೊಳಿಸುವ ಬಗ್ಗೆ.

**ಉಲ್ಲೇಖ:** ಸರ್ಕಾರದ ಪತ್ರ ಸಂಖ್ಯೆ: ಆಕುಕ 27 ಹೆಚ್ಎಸ್ಹೆಚ್ 2017, ದಿನಾಂಕ: 10-01-2017.

******

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಗೆ ಸೇರಿದ ಗ್ರಾಮೀಣ ಪ್ರದೇಶದ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ವರ್ಗಾವಣೆ/ ಸೇವಾನಿರತ ಸ್ನಾತಕೋತ್ತರ ವ್ಯಾಸಂಗಕ್ಕಾಗಿ/ ನಿಯೋಜನೆ/ ಇತ್ಯಾದಿ ಕಾರಣಗಳಿಂದ ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳ ಹುದ್ದೆಗಳು ಖಾಲಿ ಇದ್ದು, ಸಾರ್ವಜನಿಕ ಸೇವೆ ಒದಗಿಸಲು ತೊಂದರೆಯಾಗುತ್ತಿರುವುದರಿಂದ ಗ್ರಾಮೀಣ ಪ್ರದೇಶದಲ್ಲಿ ಖಾಲಿ ಇರುವ ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳ ಹುದ್ದೆಗಳನ್ನು ಗುತ್ತಿಗೆ ಆಧಾರದಲ್ಲಿ ಭರ್ತಿ ಮಾಡಿಕೊಳ್ಳಲು ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳಿಗೆ ಅನುಮತಿ ನೀಡಲಾಗಿತ್ತು. ಅದರಂತೆ ನೇಮಕ ಹೊಂದಿರುವ ಗುತ್ತಿಗೆ ಆಧಾರದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಗುತ್ತಿಗೆ ವೈದ್ಯರುಗಳನ್ನು ಖಾಯಂಗೊಳಿಸಲು ಈ ಕೆಳಕಂಡ ನಮೂನೆಯಲ್ಲಿ ಮಾಹಿತಿಯನ್ನು ಕ್ರೋಢೀಕರಿಸಿ ಸಲ್ಲಿಸಲು ಕ್ರಮವಹಿಸುವುದು.

**<u>ನಮೂನೆ</u>**

| ಕ್ರ. ಸಂ | ವೈದ್ಯರ ಹೆಸರು ಮತ್ತು ಕರ್ತವ್ಯ ನಿರ್ವಹಿಸುತ್ತಿರುವ ಸ್ಥಳ | ಜನ್ಮ ದಿನಾಂಕ | ಸೇವೆಗೆ ಸೇರಿದ ದಿನಾಂಕ | ನೇಮಕಾತಿ ಆದೇಶದ ಸಂಖ್ಯೆ | ಆಯ್ಕೆಯಾದ ಪ್ರವರ್ಗ | ಅಧಿಸೂಚನೆಯ ಜಾಹಿರಾತಿನ ಪ್ರತಿ | ಸೇವಾ ವಿಚ್ಛಿನ್ನತೆ ಇಲ್ಲದೆ ಮುಂದುವರೆದು ಕಾರ್ಯ ನಿರ್ವಹಿಸುತ್ತಿರುವ ದಿನಾಂಕ | ಸೇವಾ ವಿಚ್ಛಿನ್ನತೆ/ ಗೈರು ಹಾಜರಾದ ಅವಧಿ | ಷರಾ |
|---|---|---|---|---|---|---|---|---|---|
| 1 | 2 | 3 | 4 | 5 | 6 | 7 | 8 | 9 | 10 |
| | | | | | | | | | |

ಆಯುಕ್ತಾಲಯಕ್ಕೆ ಮಾಹಿತಿ ನೀಡುವಾಗ ನಿಖರವಾದ ಮಾಹಿತಿ ಸಲ್ಲಿಸುವುದು, ಅಪೂರ್ಣ ಮಾಹಿತಿ/ಸುಳ್ಳು ಮಾಹಿತಿ ನೀಡಿದ್ದಲ್ಲಿ ಸಂಬಂಧಪಟ್ಟ ಅಧಿಕಾರಿಗಳನ್ನೆ ನೇರವಾಗಿ ಹೊಣೆಗಾರರನ್ನಾಗಿ ಮಾಡಲಾಗುವುದು ಮತ್ತು ದಿನಾಂಕ: 18-03-2017ರ ಒಳಗೆ ಎಲ್ಲಾ ಮಾಹಿತಿಗಳನ್ನು ಸಂಬಂಧಿಸಿದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು ಧೃಡೀಕರಣದೊಂದಿಗೆ ಸಲ್ಲಿಸುವುದು ನಿಗಧಿಪಡಿಸಿದ ದಿನಾಂಕದೊಳಗೆ ಪ್ರಸ್ತಾವನೆಯನ್ನು ಸಲ್ಲಿಸದೇ ಅಥವಾ ನಿಮ್ಮ ಜಿಲ್ಲೆಯ ಗುತ್ತಿಗೆ ವೈದ್ಯರ ಹೆಸರನ್ನು ನೀಡದೆ ಇದ್ದಲ್ಲಿ ಸಂಬಂಧಿಸಿದವರನ್ನೇ ನೇರ ಹೊಣೆಗಾರರನ್ನಾಗಿ ಮಾಡಿ ನಿಯಮಾನುಸಾರ ಶಿಸ್ತು ಕ್ರಮ ಜರುಗಿಸಲು ಸರ್ಕಾರಕ್ಕೆ ವರದಿ ಸಲ್ಲಿಸಲಾಗುವುದು.

20.2.17
ಆಯುಕ್ತರು,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು.

-2..,

<u>ಪ್ರತಿಯನ್ನು:</u>

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು- ಇವರ ಮಾಹಿತಿಗಾಗಿ ಸಲ್ಲಿಸಲಾಗಿದೆ.
2. ಮಾನ್ಯ ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು- ಇವರ ಮಾಹಿತಿಗಾಗಿ ಸಲ್ಲಿಸಲಾಗಿದೆ.
3. ಎಲ್ಲಾ ಸಂಬಂಧಪಟ್ಟ ಗುತ್ತಿಗೆ ವೈದ್ಯಾಧಿಕಾರಿಗಳಿಗೆ.
4. ಇಲಾಖಾ ಅಂತರ್ಜಾಲದಲ್ಲಿ ಪ್ರಕಟಿಸುವುದು.
5. ಕಛೇರಿ ಪ್ರತಿ.